ಮುಖ್ಯಮಂತ್ರಿಗಳ ಪರಿಹಾರ ನಿಧಿ

೫೫೩. ಶ್ರೀ ಬಿ. ಬಸವಲಿಂಗಪ್ಪ (ಯಲಹಂಕ) ಈ ಕೆಳಕಂಡ ಪ್ರಶ್ನೆಗಳಿಗೆ ಮಾನ್ಯ ಮುಖ್ಯ ಮಂತ್ರಿಗಳು ದಯವಿಟ್ಟು ಉತ್ತರಿಸುವರೇ ?

ಅ) ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಸಾರ್ವಜನಿಕರಿಂದ ಪಡೆದಿರುವ ವಂತಿಗೆಯು ಮೊತ್ತ ವೆಷ್ಟು ?

ಆ) ಈ ನಿಧಿಯಿಂದ ಯಾವ ಯಾವ ಬಾಬ್ತುಗಳಿಗೆ ಹಣ ವಿನಿಯೋಗಿಸಲಾಗಿದೆ ?

ಇ) ನಿಧಿಯಿಂದ ಹಣವನ್ನು ವೆಚ್ಚ ಮಾಡಲು ಇರುವ ಸರ್ಕಾರದ ಕಾರ್ಯ ನೀತಿ ಏನು ?

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯಮಂತ್ರಿಗಳು) :

ಅ) ೧೯೮೫-೮೬ರಲ್ಲಿ ರೂ. ೩೦, ೩೧, ೨೧೨-೭೫

ಆ) ಈ ಕೆಳಕಂಡ ಪ್ರಕರಣಗಳಲ್ಲಿ ಪರಿಹಾರ ನೀಡಲಾಗುತ್ತಿದೆ.

೧) ಕಡು ಬಡತನ

೨) ನಿರುದ್ಯೋಗ

೩) ಖಾಯಿಲೆ

೪) ಅಂಗವಿಕಲತೆ

೫) ಕುಟುಂಬದಲ್ಲಿ ದುಡಿಯುವವರು ಅಪಘಾತದಲ್ಲಿ ಮೃತಪಟ್ಟಲ್ಲಿ ಮತ್ತು ವೈದವ್ಯ ಪ್ರಾಪ್ತವಾದಲ್ಲಿ

೬) ಅಪಘಾತದಿಂದಾಗಿ ಉಂಟಾಗಿರುವ ಆಸ್ತಿಪಾಸ್ತಿ ನಷ್ಟ

ಇ) ಪರಿಹಾರವನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿ ನಿಯಮಾವಳಿಗಳು ೧೯೭೮ ಇದರ ಅನ್ವಯ ಮಂಜೂರು ಮಾಡಲಾಗುತ್ತದೆ.

ಚಿಕ್ಕಮಗಳೂರಿನಲ್ಲಿ ಸಾರ್ವತ್ರಿಕ ಆಸ್ಪತ್ರೆಯ ನಿರ್ಮಾಣ

೫೫೪. ಶ್ರೀ ಬಿ. ಬಿ. ಶಂಕರ್.(ಚಿಕ್ಕಮಗಳೂರು) ಈ ಕೆಳಕಂಡ ಪ್ರಶ್ನೆಗಳಿಗೆ ಮಾನ್ಯ ಆರೋಗ್ಯ ಹಾಗೂ ಅಬಕಾರಿ ಮಂತ್ರಿಗಳು ದಯವಿಟ್ಟು ಉತ್ತರಿಸುವರೆ ?

ಅ) ಚಿಕ್ಕಮಗಳೂರಿನಲ್ಲಿ ಸಾರ್ವತ್ರಿಕ ಆಸ್ಪತ್ರೆ ಕಟ್ಟಲು ಮಾಸ್ಟರ್ ಪ್ಲಾನ್ ತಯಾರಿಸಿದ್ದು ಹಾಗೂ ಮಾನ್ಯ ಮಂತ್ರಿಗಳು ಹಿಂದಿನ ಅಧಿವೇಶನದಲ್ಲಿ ಆಶ್ವಾಸನೆ ನೀಡಿದ್ದರೂ ಕಾರ್ಯಾರಂಭ ಮಾಡಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ?

ಶ್ರೀ ಹೆಚ್. ಟಿ. ಕೃಷ್ಣಪ್ಪ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).

ಅ) ಸರ್ಕಾರದ ಮುಖ್ಯ ಶಿಲ್ಪಿಯವರು ತಯಾರಿಸಿದ ನಕ್ಷೆ ಪ್ರಕಾರ ಸಾರ್ವಜನಿಕ ಆಸ್ಪತ್ರೆ ನಿರ್ಮಾಣ ಪ್ರದೇಶದಲ್ಲಿ ಬರುವ ಚಿಕ್ಕಮಗಳೂರು ಜಿಲ್ಲಾಧಿಕಾರಿಯವರ ವಸತಿ ಗೃಹವನ್ನು ಕೆಡವಿ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಬೇಕಾಗಿದೆ. ಜಿಲ್ಲಾಧಿಕಾರಿಯವರಿಗೆ ಬೇರೆ ವಸತಿ ಗೃಹ ಸೌಕರ್ಯವನ್ನು ಕಲ್ಪಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ. ಆದ್ದರಿಂದ ಕಟ್ಟಡ ನಿರ್ಮಾಣದಲ್ಲಿ ತಡವಾಗುತ್ತಿದೆ.